ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಬೋಧಕೇತರ ನೌಕರರಿಗೆ ಪ್ರಸ್ತುತ ಲಭ್ಯವಿರುವ ಸ್ಥಗಿತ ವೇತನ ಬಡ್ತಿಗಳ ಸಂಖ್ಯೆಯನ್ನು 05 ರಿಂದ 08 ಕ್ಕೆ ಹೆಚ್ಚಿಸಿ, ಪರಿಷ್ಕರಿಸುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಎಫ್.ಡಿ 12 ಎಸ್.ಆರ್.ಪಿ 2012 (vii ದಿನಾಂಕ:14-06-2012.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಪತ್ರ ಸಂಖ್ಯೆ:ಕಾಶಿಇ/252/ಸ್ಥಗಿತ ವೇತನ/2013-14/ಸೇವಿ-1, ದಿನಾಂಕ:23-11-2020 ಮತ್ತು 28-06-2021.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರಗಳಲ್ಲಿ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಉಲ್ಲೇಖ (2) ರಲ್ಲಿ ಆರ್ಥಿಕ ಇಲಾಖೆಯು ಹೊರಡಿಸಿರುವ ದಿನಾಂಕ:16-06-2012 ರ ಸರ್ಕಾರಿ ಆದೇಶದಲ್ಲಿ, ಸರ್ಕಾರಿ ನೌಕರರಿಗೆ ಪ್ರಸ್ತುತ ನೀಡುತ್ತಿರುವ 05 ಸ್ಥಗಿತ ವೇತನ ಬಡ್ತಿಗಳನ್ನು 08 ಸ್ಥಗಿತ ವೇತನ ಬಡ್ತಿಗಳಿಗೆ ಹೆಚ್ಚಿಸಿ, ದಿನಾಂಕ:01-04-2012 ರಿಂದ ಜಾರಿಗೆ ಬರುವಂತೆ ಈ ಸೌಲಭ್ಯವನ್ನು ವಿಸ್ತರಿಸಲಾಗಿರುತ್ತದೆ. ಆದರೆ, ಈ ಸೌಲಭ್ಯವನ್ನು ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ರಾಜ್ಯ ವೇತನ ಶ್ರೇಣಿ ಪಡೆಯುತ್ತಿರುವ ಬೋಧಕೇತರ ಸಿಬ್ಬಂದಿಗಳಿಗೆ ವಿಸ್ತರಿಸುವುದಕ್ಕೆ ಸಂಬಂಧಿಸಿದಂತೆ, ಯಾವುದೇ ಆದೇಶ/ಸುತ್ತೋಲೆ/ಮಾರ್ಗಸೂಚಿಗಳನ್ನು ಹೊರಡಿಸಿಲ್ಲವೆಂದು ವಿವರಿಸುತ್ತಾ, ಈ ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ ನೌಕರರಿಂದ ಅನೇಕ ಮನವಿಗಳು ಕಛೇರಿಯಲ್ಲಿ ಸ್ವೀಕೃತವಾಗುತ್ತಿದ್ದು, ಸದರಿ ಸೌಲಭ್ಯಗಳನ್ನು ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಬೋಧಕೇತರ ಸಿಬ್ಬಂದಿಗಳಿಗೆ ವಿಸ್ತರಿಸಿ ಆದೇಶಿಸಬೇಕೆಂದು ಸರ್ಕಾರವನ್ನು ಕೋರಿರುತ್ತಾರೆ.

ಅದರಂತೆ, ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 172 ಯುಪಿಸಿ 2019**

**ಬೆಂಗಳೂರು, ದಿನಾಂಕ:03-06-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆರ್ಥಿಕ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ:ಆಇ 12 ಎಸ್‌ಆರ್‌ಪಿ 12 (VII) ದಿನಾಂಕ:14-06-2012 ರಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ಸ್ಥಗಿತ ವೇತನ ಬಡ್ತಿಗಳನ್ನು ಪರಿಷ್ಕರಿಸಿದ ಮಾದರಿಯಲ್ಲಿ, ಸರ್ಕಾರಿ ಅನುದಾನಿತ ಖಾಸಗಿ ಪದವಿ ಕಾಲೇಜುಗಳಲ್ಲಿನ ಬೋಧಕೇತರ ಸಿಬ್ಬಂದಿಗಳಿಗೆ ಲಭ್ಯವಿರುವ ಸ್ಥಗಿತ ವೇತನ ಬಡ್ತಿಗಳ ಸಂಖ್ಯೆಯನ್ನು ಪ್ರಸ್ತುತ 05 ರಿಂದ 08 ಕ್ಕೆ ದಿನಾಂಕ:01-07-2017 ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಮತ್ತು ಅದರ ಆರ್ಥಿಕ ಲಾಭವನ್ನು ದಿನಾಂಕ:01-01-2022 ರಿಂದ ಜಾರಿಗೆ ಬರುವಂತೆ, ಮಂಜೂರು ಮಾಡಲಾಗಿದೆ. ಅದರಂತೆ, ಅನುದಾನಿತ ಖಾಸಗಿ ಪದವಿ ಕಾಲೇಜುಗಳಲ್ಲಿ ರಾಜ್ಯ ವೇತನ ಶ್ರೇಣಿಯಲ್ಲಿರುವ ಬೋಧಕೇತರ

ಸಿಬ್ಬಂದಿಗಳಿಗೆ ಈ ಸೌಲಭ್ಯವನ್ನು ದಿನಾಂಕ:01-07-2017 ರಿಂದ ಜಾರಿಗೆ ಬರುವಂತೆ ಕಾಲ್ಪನಿಕವಾಗಿ ವಿಸ್ತರಿಸಿ, ಅದರ ಆರ್ಥಿಕ ಲಾಭವನ್ನು ದಿನಾಂಕ:01-01-2022 ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಿ ಆದೇಶಿಸಿದೆ.

ಮುಂದುವರೆದು, ಸ್ಥಗಿತ ವೇತನ ಬಡ್ತಿ ಮಂಜೂರಾತಿ ಕುರಿತಂತೆ ಹೊರಡಿಸಲಾದ ದಿನಾಂಕ:18-03-1996 ರ ಸರ್ಕಾರಿ ಆದೇಶ ಸಂಖ್ಯೆ:ಆಇ 03 ಎಸ್‌ಆರ್‌ಪಿ 96ರ ನಿಯಮಗಳು ಅನ್ವಯಿಸುತ್ತವೆ ಹಾಗೂ ಈ ಸಂಬಂಧ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ನಿಬಂಧನೆ / ಮಾರ್ಗಸೂಚಿಗಳು ಅಷ್ಟರಮಟ್ಟಿಗೆ ಬದಲಾವಣೆಗೊಂಡು ಅನ್ವಯಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 72 ಸೇ-02/2022, ದಿನಾಂಕ:19-05-2022ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ಹರ್ಷ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).

**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/252/ಸ್ಥಗಿತ ವೇತನ/2013-14/ಸೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:10-06-2022.

ಮೇಲ್ಕಂಡ ಸರ್ಕಾರದ ಆದೇಶ ಸಂಖ್ಯೆ: ಇಡಿ 172 ಯುಪಿಸಿ 2019 ಬೆಂಗಳೂರು, ದಿನಾಂಕ: 03-06-2022ರ ಪ್ರತಿಯನ್ನು ಈ ಕೆಳಕಂಡವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.

10.06.22
**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

**ಇವರಿಗೆ:**

1. ಇಲಾಖಾ ವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರುಗಳಿಗೆ
2. ಇಲಾಖಾ ವ್ಯಾಪ್ತಿಯ ಎಲ್ಲಾ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರುಗಳ ಮೂಲಕ)
3. ಮ್ಯಾನೇಜರ್ / ಅಧೀಕ್ಷಕರು, ಕೇಂದ್ರ ಕಛೇರಿ, ಬೆಂಗಳೂರು (ಎಲ್ಲಾ ವಿಭಾಗಗಳು)
4. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು - ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.



Scanned with CamScanner